ಕಿಂಡ್ಯಾರ್ಟರ್
ನಿ-72
ಕ್ರ-89
146ನೇ ಅಧಿವೇಶನ

## ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ಕರ್ನಾಟಕ ವಿಧಾನ ಪರಿಷತ್ ಸದಸ್ಯರಾದ ಶ್ರೀ. ಎಸ್. ರವಿ, ಇವರು ರಾಜ್ಯದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರ/ ಸಮುದಾಯ ಆರೋಗ್ಯ ಕೇಂದ್ರ/ ತಾಲ್ಲೂಕು ಆಸ್ಪತ್ರೆ/ಜಿಲ್ಲಾ ಆಸ್ಪತ್ರೆಗಳಲ್ಲಿ ವೈದ್ಯರು, ನರ್ಸ್‌ಗಳು, ಪ್ರಯೋಗಾಲಯ ತಂತ್ರಜ್ಞರು ಮತ್ತು ಇತರೆ ಸಿಬ್ಬಂದಿಗಳ ಹುದ್ದೆಗಳ ಕೊರತೆ ಇದೆ. ಇದರ ಆಸ್ಪತ್ರೆಗಳಿಗೆ ಬೇಕಾದ ಮೂಲಭೂತ ಸೌಕರ್ಯ ಮತ್ತು ಆಂಬುಲೆನ್ಸ್‌ಗಳ ಕೊರತೆಯೂ ಇದೆ. ಇದರಿಂದಾಗಿ ದೇಶದ "ಆರೋಗ್ಯ ಸೂಚ್ಯಂಕ ವರದಿಗಳಂತೆ" ಕರ್ನಾಟಕ ರಾಜ್ಯವು ಆರೋಗ್ಯ ಕ್ಷೇತ್ರದಲ್ಲಿ ಒಟ್ಟಾರೆ ಕಳಪೆ ಸಾಧನೆ ಮಾಡಿರುವ ಬಗ್ಗೆ ನಿಯಮ 72ರಡಿಯಲ್ಲಿ ಪ್ರಸ್ತಾಪಿಸಿರುವ ವಿಷಯದ ಕುರಿತು ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಹೇಳಿಕೆ.

*************

ರಾಜ್ಯದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರ/ ಸಮುದಾಯ ಆರೋಗ್ಯ ಕೇಂದ್ರ/ ತಾಲ್ಲೂಕು ಆಸ್ಪತ್ರೆ/ಜಿಲ್ಲಾ ಆಸ್ಪತ್ರೆಗಳಲ್ಲಿ ಮಂಜೂರಾದ, ಕಾರ್ಯನಿರತ ಮತ್ತು ಖಾಲಿ ಇರುವ ವೈದ್ಯಾಧಿಕಾರಿ/ ತಜ್ಞವೈದ್ಯರ/ ದಂತ ಆರೋಗ್ಯಾಧಿಕಾರಿ ಹುದ್ದೆಗಳ ಮಾಹಿತಿ ಕೆಳಕಂಡಂತಿದೆ.

| ಕ್ರ.ಸಂ. | ಹುದ್ದೆಗಳು | ಮಂಜೂರು | ಕಾರ್ಯನಿರತ | | ಖಾಲಿ ಹುದೆಗಳು |
|---|---|---|---|---|---|
| | | | ಖಾಯಂ | ಗುತ್ತಿಗೆ | |
| 1. | ತಜ್ಞ ವೈದ್ಯರು | 2876 | 2333 | | 543 |
| 2. | ಹಿರಿಯ ವೈದ್ಯಾಧಿಕಾರಿ | 241 | 151 | | 90 |
| 3. | ತುರ್ತುಚಿಕಿತ್ಸಾ ವೈದ್ಯಾಧಿಕಾರಿ | 706 | 323 | | 383 |
| 4. | ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ | 2355 | 2187 | 79 | 89 |
| 5. | ದಂತಆರೋಗ್ಯಾಧಿಕಾರಿ | 425 | 326 | 58 | 41 |

ಖಾಲಿ ಇರುವ 99 (58+41) ದಂತ ಆರೋಗ್ಯಾಧಿಕಾರಿ ಹುದ್ದೆಗಳ ಪೈಕಿ 88 ಹುದ್ದೆಗಳನ್ನು ನೇರ ನೇಮಕಾತಿ ಸಮಿತಿ ಮೂಲಕ ಭರ್ತಿ ಮಾಡುವ ಪ್ರಕ್ರಿಯೆ ಅಂತಿಮ ಹಂತದಲ್ಲಿದೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಸೇವಾನಿರತ ಸ್ನಾತಕೋತ್ತರ ವ್ಯಾಸಂಗ ಪೂರೈಸಿ ಬರುವ ತಜ್ಞ ವೈದ್ಯರುಗಳನ್ನು ಖಾಲಿ ಇರುವ ಆಯಾ ತಜ್ಞತೆ ಹುದ್ದೆಗಳಿಗೆ ನೇಮಿಸುವ ಮೂಲಕ ತಜ್ಞ ವೈದ್ಯರ ಕೊರತೆಯನ್ನು ನೀಗಿಸಲು ಕ್ರಮಕೈಗೊಳ್ಳಲಾಗುವುದು.

2021ನೇ ಸಾಲಿನಲ್ಲಿ ಸ್ನಾತಕೋತ್ತರ ಪದವಿ/ಡಿಪ್ಲೋಮಾ ಪೂರ್ಣಗೊಂಡು ಉತ್ತೀರ್ಣರಾಗಿರುವ ಅಭ್ಯರ್ಥಿಗಳಿಗೆ ಒಂದು ವರ್ಷ ಕಡ್ಡಾಯ ಸರ್ಕಾರಿ ಸೇವೆಗೆ ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ವ್ಯಾಪ್ತಿಗೆ 1226 ಅಭ್ಯರ್ಥಿಗಳಿಗೆ ಸ್ಥಳ ನಿಯುಕ್ತಿಗೊಳಿಸಲಾಗಿದ್ದು, ಇದರಲ್ಲಿ 932 ಅಭ್ಯರ್ಥಿಗಳು ಕರ್ತವ್ಯಕ್ಕೆ ವರದಿ ಮಾಡಿಕೊಂಡಿರುತ್ತಾರೆ.

ಪ್ರತಿ ವರ್ಷ ಎಂಬಿಬಿಎಸ್ ಪದವಿ ಪೂರೈಸಿ ಕಡ್ಡಾಯ ಗ್ರಾಮೀಣ ಸೇವೆಗಾಗಿ ಬರುವ ವೈದ್ಯ ಅಭ್ಯರ್ಥಿಗಳನ್ನು ಖಾಲಿ ಇರುವ ವೈದ್ಯಾಧಿಕಾರಿ ಹುದ್ದೆಗಳಿಗೆ 1 ವರ್ಷದ ಕಡ್ಡಾಯ ಗ್ರಾಮೀಣ ಸೇವೆಗಾಗಿ ನೇಮಿಸುತ್ತಿದ್ದು, ಈಗ 2015ರಲ್ಲಿ ಎಂಬಿಬಿಎಸ್ ಪದವಿಗೆ ಸೇರಿ, ಪೂರೈಸಿದ ಅಭ್ಯರ್ಥಿಗಳಲ್ಲಿ ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ವ್ಯಾಪ್ತಿಗೆ 2051 ಅಭ್ಯರ್ಥಿಗಳಿಗೆ ಸ್ಥಳ ನಿಯುಕ್ತಿಗೊಳಿಸಲಾಗಿದ್ದು, ಇದರಲ್ಲಿ 1768 ಅಭ್ಯರ್ಥಿಗಳು ವರದಿ ಮಾಡಿಕೊಂಡಿರುತ್ತಾರೆ. ಈ ರೀತಿಯಾಗಿ ವೈದ್ಯಾಧಿಕಾರಿಗಳ ಕೊರತೆಯನ್ನು ನೀಗಿಸಲು ಕ್ರಮ ಕೈಗೊಳ್ಳಲಾಗಿರುತ್ತದೆ.

ಕಿರಿಯ ವೈದ್ಯಕೀಯ ಪ್ರಯೋಗ ಶಾಲಾ ತಂತ್ರಜ್ಞರ / ಶುಶ್ರೂಷಧಿಕಾರಿಗಳ ಹುದ್ದೆಗಳ ವಿವರ ಈ ಕೆಳಕಂಡಂತೆ ಇರುತ್ತದೆ.

| ಹುದ್ದೆಯ ವಿವರ | ಮಂಜೂರಾತಿ | ಕಾರ್ಯನಿರತ | ಖಾಲಿ |
|---|---|---|---|
| ಕಿರಿಯ ವೈದ್ಯಕೀಯ ಪ್ರಯೋಗ ಶಾಲಾ ತಂತ್ರಜ್ಞರ | 2313 | 1793 | 520 |
| ಶುಶ್ರೂಷಧಿಕಾರಿಗಳು | 8835 | 7020 | 1815 |

ರಾಜ್ಯದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರ/ ಸಮುದಾಯ ಆರೋಗ್ಯ ಕೇಂದ್ರ/ ತಾಲ್ಲೂಕು ಆಸ್ಪತ್ರೆ/ಜಿಲ್ಲಾ ಆಸ್ಪತ್ರೆಗಳಿಗೆ ಅಗತ್ಯಕ್ಕೆ ತಕ್ಕಂತೆ ಮೂಲಭೂತ ಸೌಲಭ್ಯ ಒದಗಿಸಲಾಗಿದೆ. ಹೆಚ್ಚಿನ ಬೇಡಿಕೆ ಬಂದಲ್ಲಿ ಅನುದಾನದ ಲಭ್ಯತೆಯ ಮೇರೆಗೆ ಹಂತ-ಹಂತವಾಗಿ ಒದಗಿಸಲಾಗುತ್ತದೆ.

ಕರ್ನಾಟಕ ರಾಜ್ಯದಲ್ಲಿ ಸಾಕಷ್ಟು ಇಲಾಖಾ ಅಂಬ್ಯುಲೆನ್ಸಗಳು ಇದ್ದು. ಜನಸಂಖ್ಯೆಗೆ ಅನುಗುಣವಾಗಿ ಲಭ್ಯವಿರುತ್ತದೆ.

WHO standards, there should be atleast one Ambulance per 1,00,000 population in the plains and one for every 70,000 population in hilly terrain or tribal areas where population Is scattered.

ರಾಜ್ಯದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರ ಅಮೃತ ಯೋಜನೆಯಡಿಯಲ್ಲಿ ರಾಜ್ಯದಲ್ಲಿ 750 ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಒಂದು ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ರೂ.20.00 ಲಕ್ಷದಂತೆ, ಒಂದು ಜಿಲ್ಲೆಗೆ 25 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಗುರುತಿಸಿದ್ದು, ಒಟ್ಟು ರೂ.150 ಕೋಟಿ ಮೊತ್ತದ ಅನುದಾನವನ್ನು ಲೆಕ್ಕಶೀರ್ಷಿಕೆ 4210-01-110-1-386 ಅಡಿಯಲ್ಲಿ ಸರ್ಕಾರದ ಅನುಮೋದನೆ ನೀಡಿ ದಿನಾಂಕ:23-12-2021 ರಲ್ಲಿ ಆದೇಶಿಸಲಾಗಿದೆ.

ಇದಲ್ಲದೆ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ವಾರ್ಷಿಕವಾಗಿ ರೂ.1.75 ಲಕ್ಷ ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳಿಗೆ ರೂ.3.00 ಲಕ್ಷ ಮತ್ತು ತಾಲ್ಲೂಕು ಆಸ್ಪತ್ರೆಗಳಿಗೆ ರೂ.5.00 ಲಕ್ಷ ಹಾಗೂ ಜಿಲ್ಲಾ ಆಸ್ಪತ್ರೆಗಳಿಗೆ ರೂ.10.00 ಲಕ್ಷಗಳನ್ನು ಮುಕ್ತ ನಿಧಿಯನ್ನಾಗಿ ಒದಗಿಸಿದ್ದು, ಹೆಚ್ಚಿನ ಮೂಲಭೂತ ಸೌಕರ್ಯಗಳ ನಿರ್ವಹಣೆಗಾಗಿ ಅನುದಾನ ಬೇಕಾದಲ್ಲಿ ಆರೋಗ್ಯರಕ್ಷಾ ಸಮಿತಿಯಲ್ಲಿ ಲಭ್ಯವಿರುವ ಅನುದಾನವನ್ನು ಉಪಯೋಗಿಸಿಕೊಳ್ಳಬಹುದು. ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ರೂ.4.00 ಲಕ್ಷಗಳನ್ನು ಆರೋಗ್ಯ ಕ್ಷೇಮ ಕೇಂದ್ರ(HWC) ಮೂಲಭೂತ ಸೌಕರ್ಯಗಳಿಗೆ ಅನುದಾನವನ್ನು ನೀಡಲಾಗಿದೆ.

2020-21ನೇ ಸಾಲಿನಲ್ಲಿ ಪ್ರಾಥಮಿಕ ಆರೋಗ್ಯ ಸೌಲಭ್ಯಗಳನ್ನು ಬಲಪಡಿಸಲು 15ನೇ ಹಣಕಾಸು ಆಯೋಗದ ಅನುದಾನ ಲೆಕ್ಕಶೀರ್ಷಿಕೆ 2210-06-800-00-04 ಅಡಿಯಲ್ಲಿ ರಾಜ್ಯಕ್ಕೆ ರೂ.552 ಕೋಟಿ ಅನುದಾನ ಲಭ್ಯವಿದ್ದು ಈ ಅನುದಾನವನ್ನು ಬಳಕೆ ಮಾಡಿಕೊಳ್ಳಬಹುದಾಗಿದೆ. ಆಸ್ಪತ್ರೆ ನಿರ್ಮಾಣ / ಉನ್ನತೀಕರಣ ಲೆಕ್ಕಶೀರ್ಷಿಕೆ 4210-01-110-1-01 ಅಡಿಯಲ್ಲಿ ರೂ.201 ಕೋಟಿ ಅನುದಾನವನ್ನು ಮೀಸಲಿಡಲಾಗಿದೆ.

ಆರೋಗ್ಯ ಇಲಾಖೆಯ ಕಟ್ಟಡಗಳ ನಿರ್ವಹಣೆ ಲೆಕ್ಕಶೀರ್ಷಿಕೆ 2210-01-110-1-21 ಅಡಿಯಲ್ಲಿ ರೂ.25ಕೋಟಿ ಅನುದಾನವನ್ನು ಒದಗಿಸಲಾಗಿದ್ದು, ಕಾಮಗಾರಿಗಳನ್ನು ಕೈಗೊಂಡು ಪೂರ್ಣಗೊಳಿಸಲಾಗುವುದು.

ದೇಶದ "ಆರೋಗ್ಯ ಸೂಚ್ಯಂಕ ವರದಿಗಳಂತೆ" ಕರ್ನಾಟಕ ರಾಜ್ಯವು ಆರೋಗ್ಯ ಕ್ಷೇತ್ರದ ನೀತಿ ಆಯೋಗದ 2019-20ನೇ ಸಾಲಿನ ಆರೋಗ್ಯ ಸೂಚ್ಯಂಕ ವರದಿಯು ಪ್ರಕಟವಾಗಿದ್ದು, ಕರ್ನಾಟಕ ರಾಜ್ಯವು 19 ಅತಿದೊಡ್ಡ ರಾಜ್ಯಗಳ ಪೈಕಿ 9 ನೇ ಸ್ಥಾನದಲ್ಲಿರುತ್ತದೆ.

**ಆಕುಕ 20 ಹೆಚ್ ಎಸ್ ಡಿ 2022**

**(ಡಾ. ಕೆ. ಸುಧಾಕರ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು.